# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 344 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 01.02.2018

## ಸುತ್ತೋಲೆ

ವಿಷಯ: ಕರ್ನಾಟಕ ವಿಧಾನಸಭೆಗೆ ನಡೆಯಲಿರುವ ಚುನಾವಣೆಗೆ ಗ್ರಾಮ ಪಂಚಾಯತಿಗಳು ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಟಿಪ್ಪಣಿ ಸಂಖ್ಯೆ: ಮುಕಾ/167/2018, 31.01.2018

*****

ಕರ್ನಾಟಕ ವಿಧಾನಸಭೆಗೆ ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದ ನಡವಳಿಯಲ್ಲಿ ನೀಡಿರುವ ಸೂಚನೆಗಳಂತೆ ಎಲ್ಲಾ ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಚುನಾವಣೆ ಹಾಗೂ ಮತದಾನದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಿಳಿಸಲಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಹೊರಡಿಸುವ ಆದೇಶ ಹಾಗೂ ನಿರ್ದೇಶನಗಳನ್ನು ಪಾಲಿಸಿ ಮತದಾರರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದೆ. ಅಲ್ಲದೆ ಚುನಾವಣಾ ಕಾರ್ಯದಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಲಭ್ಯವಿರುವ ಕಂಪ್ಯೂಟರ್ ಹಾಗೂ ಅಂತರ್ಜಾಲ ವ್ಯವಸ್ಥೆಯನ್ನು ಬಳಸಿಕೊಳ್ಳಲು ಅನುವಾಗುವಂತೆ, ಈ ವ್ಯವಸ್ಥೆಯನ್ನು ಸುಸ್ಥಿತಿಯಲ್ಲಿಡಲು ಅಗತ್ಯ ಕ್ರಮ ವಹಿಸುವುದು. ಈ ವ್ಯವಸ್ಥೆ ಸಮರ್ಪಕವಾಗಿರುವ ಬಗ್ಗೆ ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಖುದ್ದು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಈ ನಿಟ್ಟಿನಲ್ಲಿ ಯಾವುದೇ ಲೋಪಕ್ಕೆ ಅವಕಾಶ ಕೊಡದಂತೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಿದೆ ಹಾಗೂ ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ನೀಡುವಂತೆ ಸೂಚಿಸಿದೆ.

.1/2/18
(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5) ಸಂಪಾದಕರು, ಕರ್ನಾಟಕ ವಿಕಾಸ ಮಾಸಪತ್ರಿಕೆ – ಪ್ರಕಟಣೆಗಾಗಿ.
6) ಹೆಚ್ಚುವರಿ ಪ್ರತಿ.

**ಮಾಹಿತಿಗಾಗಿ:**

1) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ಹಾಗೂ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. ಮತ್ತು ಪಂ.ರಾಜ್ ರವರ ಆಪ್ತ ಕಾರ್ಯದರ್ಶಿಗಳು.
5) ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.